# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22 ನೇ ಸಾಲಿನಲ್ಲಿ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಲೆಕ್ಕಶಿರ್ಷಿಕೆ 2225-03-277-2-37 (117) ರಡಿ ಅಯವ್ಯಯದಲ್ಲಿ ನಿಗದಿಪಡಿಸಿದ ಅನುದಾನದಲ್ಲಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 339 ಬಿಎಂಎಸ್ 2021, ದಿನಾಂಕ:02.06.2021,16.07.2021 ಮತ್ತು 30.10.2021.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಇತರೆ/ತರಬೇತಿ-1/ಸಿಆರ್-2/2021-22, ದಿನಾಂಕ:10.11.2021.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ 2021-22 ನೇ ಸಾಲಿನ ಅಯವ್ಯಯದಲ್ಲಿ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಲೆಕ್ಕಶೀರ್ಷಿಕೆ:2225-03-277-2-37 (117) ರಡಿ ಒದಗಿಸಿರುವ ಅನುದಾನ ರೂ.720.00 ಲಕ್ಷಗಳಲ್ಲಿ ಮೊದಲನೇ, ಎರಡನೇ ಮತ್ತು ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ ಪಾವತಿಸಲು ಅನುದಾನ ಅವಶ್ಯಕತೆಯಿರುವ ಹಿನ್ನಲೆಯಲ್ಲಿ ನಾಲ್ಕನೇ ಕಂತಿನ ಅನುದಾನವನ್ನು ಮುಂಗಡ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 339 ಬಿಎಂಎಸ್ 2021(ಭಾಗ-2), ಬೆಂಗಳೂರು, ದಿನಾಂಕ: 06-12-2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರಿಗೆ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಲೆಕ್ಕಶೀರ್ಷಿಕೆ: 2225-03-277-2-37 (117) ರಡಿ ಒದಗಿಸಿರುವ ಅನುದಾನದಲ್ಲಿ ಅಂತಿಮ ಕಂತಿನ ಅನುದಾನ ರೂ.180.00 ಲಕ್ಷಗಳ (ರೂ. ಒಂದು ನೂರ ಎಂಬತ್ತು ಲಕ್ಷಗಳು ಮಾತ್ರ) ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

ಷರತ್ತುಗಳು:-

1. ಸರ್ಕಾರದ ಆದೇಶದಲ್ಲಿ ವಿವಿಧ ಯೋಜನೆಗಳಿಗೆ ಮಂಜೂರು ಮಾಡಿರುವ ಅನುದಾನ ಬಿಡುಗಡೆ ಕುರಿತಂತೆ ಕಾಲಕಾಲಕ್ಕೆ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ನಿಯಮಾನುಸಾರ

..2

06/12/21

ಕ್ರಮವಹಿಸತಕ್ಕದ್ದು. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ/37/ಟಿಎಆರ್/ 2021,ದಿನಾಂಕ:26.07.2021 ಹಾಗೂ ಸಿಆಸುಇ (ಇ-ಆಡಳಿತ) ಇಲಾಖೆಯ ಅಧಿಸೂಚನೆ ಸಂಖ್ಯೆ: ಸಿಆಸು/126/ಇಜಿಎಂ/2020, ದಿನಾಂಕ:8.11.2021 ರಂತೆ ಫಲಾನುಭವಿಯ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ DBT ಮೂಲಕ ವರ್ಗಾವಣೆ ಮಾಡಲು ನಿಯಮಾನುಸಾರ ಕ್ರಮ ತೆಗೆದುಕೊಳ್ಳತಕ್ಕದ್ದು.

2. 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಯೋಜನೆಯ ಉಸ್ತುವಾರಿಗಾಗಿ ಖರ್ಚು ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಅನುದಾನದ ಕೋರಿಕೆ ಪ್ರಸ್ತಾವನೆಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
3. ಅನುದಾನ ಬಿಡುಗಡೆ ಮತ್ತು ಬಳಕೆಗೆ ಸಂಬಂಧಿಸಿದಂತೆ ಅಭ್ಯರ್ಥಿವಾರು /ತಾಲ್ಲೂಕುವಾರು/ಜಿಲ್ಲಾವಾರು ವಿವರಗಳನ್ನು ಆಯುಕ್ತಾಲಯದ ಜಾಲತಾಣದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.
4. ಕೆ.ಟಿ.ಪಿ.ಪಿ. ಕಾಯ್ದೆಯನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 512 ವೆಚ್ಚ-3/2021, ದಿನಾಂಕ:29.11.2021ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 06/12/2021

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ3), ವಿಧಾನಸೌಧ.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಕೇಂದ್ರ 2ನೇ ಮಹಡಿ, ಸೌತ್ ಬ್ಲಾಕ್ ಖನಿಜ ಭವನ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ.
3. ಸರ್ಕಾರದ ಅಧೀನ ಕಾರ್ಯದರ್ಶಿ 1 & 2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ.
4. ಸರ್ಕಾರದ ಅಧೀನ ಕಾರ್ಯದರ್ಶಿ-1, (ಸಮನ್ವಯ), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಇಲಾಖಾ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲು ಕ್ರಮವಹಿಸುವುದು.
5. ಶಾಖಾ ರಕ್ಷಾ ಕಡತ

***********